**ಕರ್ನಾಟಕ ವಿಧಾನ ಪರಿಷತ್**
**136ನೇ ಅಧಿವೇಶನ –2018**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 433(561) |
| ಸದಸ್ಯರ ಹೆಸರು | ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 13.12.2018 |

| | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಕಳೆದ 10 ವರ್ಷಗಳಿಂದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ. | ಹಾಗಿದ್ದಲ್ಲಿ, ಕೂಡಲೇ ಅರ್ಹ ಅಭ್ಯರ್ಥಿಗಳನ್ನು ನೇಮಕ ಮಾಡಿಗೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು; | ರಿಟ್ ಅರ್ಜಿ ಸಂಖ್ಯೆ:30506–23/2013 & 38581/2013ರ ಪ್ರಕರಣಗಳಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ದಿನಾಂಕ:23.02.2017ರಂದು ನೀಡಿದ ತೀರ್ಪಿನನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಲು ಸರ್ಕಾರದ ಪತ್ರ ಸಂಖ್ಯೆ:ಇಡಿ 516 ಯುಎನ್‌ಇ 2015, ದಿ:21.06.2017ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸಾಮಾನ್ಯವಾಗಿ ಅನ್ವಯಿಸುವಂತೆ ನಿರ್ದೇಶನ ನೀಡಲಾಗಿದೆ.<br><br>ಈ ನಿರ್ದೇಶನವನ್ನು ಅನುಸರಿಸಿ, ಬೆಂಗಳೂರು ವಿಶ್ವವಿದ್ಯಾಲಯದ ವಿವಿಧ ಅಧ್ಯಯನ ವಿಭಾಗಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಗುರುತಿಸಲಾಗಿರುವ ಬೋಧಕ ಬ್ಯಾಕ್‌ಲಾಗ್ ಹುದ್ದೆಗಳನ್ನು **Karnataka State Civil Services (unfilled vacancies reserved for the persons belonging to the Scheduled Castes and Scheduled Tribes) (Special Recruitment) Rules,** 2001ರ ಉಪಬಂಧಗಳು ಹಾಗೂ ಕಾಲಕಾಲಕ್ಕೆ ಸದರಿ ನಿಯಮಗಳಿಗೆ ತರಲಾಗಿರುವ ತಿದ್ದುಪಡಿಗಳು ಹಾಗೂ ಯು.ಜಿ.ಸಿ ಮಾರ್ಗಸೂಚಿ/ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಭರ್ತಿ ಮಾಡಿಕೊಳ್ಳಲು ಕ್ರಮಕೈಗೊಂಡು ಕೂಡಲೇ ಉನ್ನತ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳಿಗೆ ಮಾಹಿತಿ ಸಲ್ಲಿಸುವಂತೆ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸರ್ಕಾರದ ಪತ್ರಸಂಖ್ಯೆ:ಇಡಿ 50 ಯುಬಿವಿ 2018, ದಿನಾಂಕ:27.02.2018ರಲ್ಲಿ ಸೂಚನೆಗಳನ್ನು ನೀಡಲಾಗಿದೆ.<br><br>ಸರ್ಕಾರದ ನಿರ್ದೇಶನ ಹಾಗೂ ಸೂಚನೆಗಳನ್ವಯ ಬೆಂಗಳೂರು ವಿಶ್ವವಿದ್ಯಾಲಯದಿಂದ ಆರಂಭಿಸಲಾಗಿರುವ ಬ್ಯಾಕಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಕ್ಷಿಪ್ರಗತಿಯಲ್ಲಿ ಪ್ರಗತಿಯಲ್ಲಿರುತ್ತದೆ. |
| ಇ | ಈ ಬಗ್ಗೆ ಸರ್ಕಾರ ಶೀಘ್ರವಾಗಿ ಕ್ರಮಕೈಗೊಳ್ಳುವುದೇ? | |

**ಇಡಿ 501 ಯುಬಿವಿ 2018**

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು